ನಾರಾಯಣಸ್ವಾಮಿಯವರು ಆನೇಕಲ್‌ನಲ್ಲಿರುವ ವಸತಿ ಶಾಲೆಯ ವಿಚಾರವಾಗಿ ಹೇಳಿದ್ದಾರೆ. ಅದು ನನ್ನ ಗಮನಕ್ಕೂ ಬಂದಿದೆ. ಮೊನ್ನೆ ಅವರ ಕ್ಷೇತ್ರಕ್ಕೆ ಹೋಗಿದ್ದಾಗ ನಾವು ಈ ವಿಚಾರದ ಬಗ್ಗೆ ಮಾತನಾಡಿದ್ದೇವೆ. ಆದಷ್ಟು ಬೇಗ ಕಂದಾಯ ಇಲಾಖೆಯಿಂದ ಕಡತವನ್ನು ತರಿಸಿಕೊಂಡು ಕ್ರಮವನ್ನು ತೆಗೆದುಕೊಳ್ಳುತ್ತೇವೆ.

ಕೂಡ್ಲಿಗಿ ಪಟ್ಟಣದಲ್ಲಿ ಹಾಲೂ ಶೀಥಲೀಕರಣ ಪ್ರಾರಂಭಿಸುವುದು

37(229):- ಶ್ರೀ ಸಿರಾಜ್ ಶೇಖ್ (ಕೂಡ್ಲಿಗಿ): ಮಾನ್ಯ ಪಶು ಸಂಗೋಪನೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

1. ಕೂಡ್ಲಿಗಿ ಪಟ್ಟಣದಲ್ಲಿ ಹಾಲು ಶೀಥಲೀಕರಣ ಘಟಕ (ಬಲ್ಕ್ ಕೂಲರ್) ಪ್ರಾರಂಭಿಸುವ ಬಗ್ಗೆ ಯೋಜನೆ ಇದೆಯೇ?

2. ಇದ್ದಲ್ಲಿ ಈ ಕಾಮಗಾರಿಯನ್ನು ಯಾವಾಗ ಪ್ರಾರಂಭ ಮಾಡಲಾಗುವುದು ಅದಕ್ಕೆ ತಗಲುವ ವೆಚ್ಚವೆಷ್ಟು?

ಎಂ. ಮಹದೇವ್ (ಪಶು ಸಂಗೋಪನೆ ಮತ್ತು ಸಕ್ಕರೆ ಸಚಿವರು

1. ಹೌದು

2. ಇದು ಪರಿಶೀಲನೆಯಲ್ಲಿದೆ.

ಶ್ರೀ ಸಿರಾಜ್ ಶೇಖ್:- ಮಾನ್ಯ ಅಧ್ಯಕ್ಷರೆ, ನನ್ನ ಮೊದಲನೇ ಪ್ರಶ್ನೆಗೆ ಮಾನ್ಯ ಸಚಿವರು ಹೌದು ಎಂದು ಉತ್ತರ ಕೊಟ್ಟಿದ್ದಾರೆ. ಆ ಕಾಮಗಾರಿಯನ್ನು ಯಾವಾಗ ಪ್ರಾರಂಭ ಮಾಡಲಾಗುವುದು ಎನ್ನುವ ನನ್ನ ಎರಡನೆಯ ಪ್ರಶ್ನೆಗೆ ಪರಿಶೀಲನೆಯಲ್ಲಿದೆ ಎಂದು ಹೇಳಿದ್ದಾರೆ. ಇದನ್ನು ಪ್ರಾರಂಭ ಮಾಡಲು ಇರತಕ್ಕಂಥ ಅಡಚಣೆ ಏನು? ಇದನ್ನು ನಿಖರವಾಗಿ ಯಾವಾಗ ಪ್ರಾರಂಭ ಮಾಡುತ್ತೀರಿ ಎಂಬ ಬಗ್ಗೆ ಮಾನ್ಯ ಸಚಿವರು ತಿಳಿಸಬೇಕು ಎಂದು ನಾನು ತಮ್ಮ ಮುಖೇನ ಅವರನ್ನು ಕೇಳುತ್ತಿದ್ದೇನೆ.

ಶ್ರೀ ಎಂ. ಮಹದೇವ:- ಮಾನ್ಯ ಅಧ್ಯಕ್ಷರೆ, ಬಳ್ಳಾರಿ ಜಿಲ್ಲಾ ಪರಿಷತ್ತಿನಿಂದ ಇದಕ್ಕೆ ಪ್ರಪೋಸಲ್ ನಿನ್ನೆ ತಾನೇ ಬಂದಿದೆ. ಈ ಯೋಜನೆಯನ್ನು ಕೆ.ಎಂ.ಎಫ್ ನಲ್ಲಿ ತೆಗೆದುಕೊಳ್ಳಬೇಕೇ ಅಥವಾ ಬೇರೆ ಯೋಜನೆಯಲ್ಲಿ ತೆಗೆದುಕೊಳ್ಳಬೇಕೇ ಎನ್ನುವ ವಿಚಾರದಲ್ಲಿ ಹಣಕಾಸಿನ ಪರಿಸ್ಥಿತಿಯ ಬಗ್ಗೆ ನಾವು ಅಧ್ಯಯನ ಮಾಡುತ್ತಿದ್ದೇವೆ. ಅದಕ್ಕೆ ಸುಮಾರು 55 ಲಕ್ಷ ರೂಪಾಯಿಗಳು ಬೇಕಾಗಬಹುದೆಂದು ಒಂದು ಅಂದಾಜು ಮಾಡಲಾಗಿದೆ. ಅದಕ್ಕೆ ಯಾರು ಜವಾಬ್ದಾರಿ ತೆಗೆದುಕೊಳ್ಳಬೇಕು. ಯಾವ ರೀತಿ ಮಾಡಬೇಕು ಎನ್ನುವುದರ ಬಗ್ಗೆ ಸರ್ಕಾರ ಶೀಘ್ರದಲ್ಲೇ ನಿರ್ಧಾರ ತೆಗೆದುಕೊಳ್ಳುತ್ತದೆ.

ಶ್ರೀ ಸಿರಾಜ್ ಶೇಖ್:- ಈಗಾಗಲೇ ಬಳ್ಳಾರಿ ಜಿಲ್ಲೆಯ ವಿಶೇಷ ಅಭಿವೃದ್ಧಿ ಯೋಜನೆಯಡಿಯಲ್ಲಿ ಈ ಘಟಕವನ್ನು ಪ್ರಾರಂಭಿಸಲು ಅದಕ್ಕೆ ಬೇಕಾದ ಹಣವನ್ನು ಕೊಡುವುದಕ್ಕೆ ತೀರ್ಮಾನಿಸಿದ್ದಾರೆ. ಅದಕ್ಕೆ ಬೇಕಾದ ಭೂಮಿಯನ್ನು ಕೂಡ್ಲಿಗಿ ಪಟ್ಟಣದಲ್ಲಿ ಎಪಿಎಂಸಿಯವರು ಕೊಡಲು ತಯಾರಿದ್ದಾರೆ. ಈ ಕಾಮಗಾರಿಯನ್ನು ತಕ್ಷಣ ಪ್ರಾರಂಭಿಸಬೇಕು. ಬಳ್ಳಾರಿ ಜಿಲ್ಲೆಯ

ಹಿಂದುಳಿದ ತಾಲ್ಲೂಕುಗಳಾದ ಕೂಡ್ಲಿಗಿ, ಹಗರಿಬೊಮ್ಮನಹಳ್ಳಿ, ಸಂಡೂರು ಭಾಗದ ರೈತರು ಹೈಸೋದ್ಯಮದಲ್ಲಿ ತೊಡಗಿಸಿಕೊಂಡು ಅವರ ಆರ್ಥಿಕ ಸ್ಥಿತಿಯನ್ನು ಉತ್ತಮಗೊಳಿಸುವುದಕ್ಕೆ ಈ ಹಾಲು ಶೀಥಲೀಕರಣದ ಘಟಕದ ಅವಶ್ಯಕತೆ ಬಹಳವಾಗಿದೆ. ಈ ಭಾಗದ ಹಾಲೂ 70 ಕಿ.ಮೀ ದೂರದಲ್ಲಿರುವ ಇಟಗಿಗೆ ಹೋಗುತ್ತಿದೆ. ಅದರಿಂದಾಗಿ ರೈತರಿಗೆ ತೊಂದರೆಯಾಗುತ್ತಿದೆ. ಆದುದರಿಂದ, ತಕ್ಷಣ ಈ ಯೋಜನೆಯನ್ನು ಪ್ರಾರಂಭಿಸಬೇಕೆಂದು ನಾನು ತಮ್ಮ ಮೂಲಕ ಮಾನ್ಯ ಮಂತ್ರಿಯವರನ್ನು ಒತ್ತಾಯಿಸುತ್ತೇನೆ.

ಶ್ರೀ ಎಂ. ಮಹದೇವ:- ಈ ಎಲ್ಲಾ ವಿಷಯವನ್ನು ಗಮನದಲ್ಲಿಟ್ಟುಕೊಂಡು ಸರ್ಕಾರ ಕ್ರಮ ತೆಗೆದುಕೊಳ್ಳುತ್ತದೆ.

38(435):- ಶ್ರೀ ಹೆಚ್.ಎಂ. ಚಂದ್ರಶೇಖರಪ್ಪ (ಶಿವಮೊಗ್ಗ):- ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

1. ಶಿವಮೊಗ್ಗ ನಗರ ಗಾಂಧಿ ಪಾರ್ಕಿನಲ್ಲಿ ಅಂಬೇಡ್ಕರ್ ಭವನ ನಿರ್ಮಾಣ ಯೋಜನೆ ಯಾವ ಹಂತದಲ್ಲಿದೆ?

2. ಈ ಯೋಜನೆಗೆ ಇದುವರೆಗೆ ಸರ್ಕಾರದ ವತಿಯಿಂದ ಹಾಗೂ ಇತರೆ ಇಲಾಖೆ ವತಿಯಿಂದ ಎಷ್ಟು ಹಣ ಬಿಡುಗಡೆಯಾಗಿರುತ್ತದೆ?

3. ಈ ಪೈಕಿ ಎಷ್ಟು ಹಣ ಖರ್ಚಾಗಿರುತ್ತದೆ?

4. 3-4 ವರ್ಷಗಳಿಂದ ಕಾಮಗಾರಿ ಅಪೂರ್ಣಗೊಂಡು ನೆನೆಗುದಿಗೆ ಬಿದ್ದಿರುವುದಕ್ಕೆ ಕಾರಣಗಳೇನು?

5. ಈ ಕಾಮಗಾರಿಯನ್ನು ಯಾವಾಗ ಪೂರ್ಣ-ಗೊಳಿಸಲಾಗುವುದು?

ಶ್ರೀ ಎ. ಕೃಷ್ಣಪ್ಪ (ಸಮಾಜ ಕಲ್ಯಾಣ ಸಚಿವರು)

1. 1ನೇ ಮಹಡಿಯ ಕಾಮಗಾರಿ ಕೆಲಸ ಮೇಲ್ಚಾವಣಿಯ ಮಟ್ಟಕ್ಕೆ ಬಂದಿದೆ.

2. 1. ಸರ್ಕಾರದ ವತಿಯಿಂದ ರೂ. 5.00

2. ಇತರೆ ಮೂಲಗಳಿಂದ ಸ್ಥಳೀಯವಾಗಿ - ರೂ. 52.05

ಒಟ್ಟು ರೂ. 57.05 ಲಕ್ಷ

3. ರೂ. 38.00 ಲಕ್ಷ, ಹಣ ಖರ್ಚಾಗಿರುತ್ತದೆ.

4. ಕೆಲವು ನ್ಯೂನತೆಗಳಿಂದ ಕಾಮಗಾರಿ ಕೆಲಸ ಸ್ಥಗಿತಗೊಂಡಿತ್ತು ನ್ಯೂನತೆಗಳನ್ನು ಸರಿಪಡಿಸಲು ಪ್ರೊಫೆಸರ್ ಆರ್. ಜಗದೀಶ್. ಸಿವಿಲ್ ಇಂಜಿನಿಯರಿಂಗ್ ವಿಭಾಗದ ಮುಖ್ಯಸ್ಥರು, ಬೆಂಗಳೂರು ವಿಶ್ವವಿದ್ಯಾನಿಲಯ, ಇವರ ನೇತೃತ್ವದಲ್ಲಿ ನೇಮಿಸಲಾಗಿದ್ದ ತಾಂತ್ರಿಕ ಸಮಿತಿ ವರದಿಯ ಅನುಸಾರ ನ್ಯೂನತೆ ಸರಿಪಡಿಸುವ ಹಾಗೂ ಜೀರ್ಣೋದ್ಧಾರ ಕಾರ್ಯ ಪ್ರಾರಂಭವಾಗಿದ್ದು ಕೆಲಸ ಪ್ರಗತಿಯಲ್ಲಿದೆ.